# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ

## ದಿನಾಂಕ: 20-08-2022 ರಂದು ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ದಿನಾಂಕ: 20-08-2022 ರಂದು ಬೆಳಗ್ಗೆ 11.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-01ರ ವಾರ್ಡ್ ಸಮಿತಿಯ ಮಾನ್ಯ ನೋಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನೆಡೆದ ವಾರ್ಡ್ ಕಮಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ರಾಮಸಂಜೀವಯ್ಯ | ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಬಿ.ಬಿ.ಎಂ.ಪಿ ನೋಡಲ್ ಅಧಿಕಾರಿಗಳು (ವಾರ್ಡ್ ನಂ-01) |
| 02 | ಶ್ರೀ.ದೇವರಾಜಯ್ಯ.ಕೆ.ಬಿ. | ಸಹಾಯಕ ಅಭಿಯಂತರರು (ವಾರ್ಡ್ ನಂ-01) |
| 03 | ಶ್ರೀ.ಕೆ.ಎನ್. ಬಾಬುರೆಡ್ಡಿ | ಸಹಾಯಕ ಅಭಿಯಂತರರು (ವಿದ್ಯುತ್) ಗೈರು ಹಾಜರಾಗಿರುತ್ತಾರೆ. |
| 04 | ಶ್ರೀ.ಅಶೋಕ್ .ಎಂ.ಆರ್ | ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ |
| 05 | ಶ್ರೀ.ಶಿವಕುಮಾರ್.ಎ.ವಿ | ರೆವಿನ್ಯೂ ಇನ್ಸ್‌ಪೇಕ್ಟರ್ |
| 06 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 07 | ಶ್ರೀ. ವಿನಯ ಕುಮಾರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 08 | ಶ್ರೀ. ಎನ್. ಶ್ರೀರಾಮು ರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ |
| 09 | ಶ್ರೀ.ದರ್ಶನ್ | ಮಾರ್ಷಲ್ ಸೂಪರ್‌ವೈಸರ್ |
| 10 | ಶ್ರೀ.ವಿವೇಕ್ | ಕಿರಿಯ ಆರೋಗ್ಯಪರಿವೀಕ್ಷಕರು ವಾಡ್-1 |
| 11 | ಶ್ರೀ.ಕುಮಾರ್ ಸ್ವಾಮಿ | ಜಾನುವಾರ ಅಧಿಕಾರಿಗಳು |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು/ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು |
| 02 | ಶ್ರೀ. ಅ.ಬ.ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |
| 04 | ಶ್ರೀ.ಎ.ಎಸ್.ರಾಜು | ಸ್ಥಳೀಯ ನಿವಾಸಿಗಳು |

| | | |
|---|---|---|
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು |
| 06 | ಶ್ರೀ.ವೆಂಕಟೇಶ್ | ಮಾರುತಿನಗರ |
| 07 | ಶ್ರೀ.ದಶರಥ | ಯಲಹಂಕ |
| 08 | ಶ್ರೀ.ಎ.ಎನ್.ಮಧುಸೂದನ್ (ಮಂಜುನಾಥ) | ಎಲೆಕ್ಟ್ರೀಕಲ್ಸ್ ಗುತ್ತಿಗೆದಾರರು |
| 09 | ಶ್ರೀ.ಆಕಾಶ್ | ಮಾರ್ಷಲ್ |

ಶ್ರೀ.ದೇವರಾಜಯ್ಯ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು ವಾರ್ಡ್ ನಂ-01 ರವರು ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರ ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೋಡೆಲ್ ಅಧಿಕಾರಿರವರನ್ನು ಕೋರಲಾಯಿತು.

ಶ್ರೀ.ರಾಮಸಂಜೀವಯ್ಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಸಮಿತಿಯ ನೋಡೆಲ್ ಅಧಿಕಾರಿಯವರು ಸಬೆಯನ್ನು ಪ್ರಾರಂಭಿಸಿ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ: 06-08-2022ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಿದರು. ಹಾಗೂ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಹಾಗೂ ಈ ಹಿಂದೆ ಕೈಗೊಂಡಿರುವ ಸಭೆಯ ನಡವಳಿಗಳನ್ನು ಸಭೆಯಲ್ಲಿ ವರದಿಯನ್ನು ಒದಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಲ್ಯಾಣ ಕಾರ್ಯಕ್ರಮದಡಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ. ಮಾನ್ಯ ವಿಶೇಷ ಆಯುಕ್ತರು (ಕಲ್ಯಾಣ) ಬಿ.ಬಿ.ಎಂ.ಪಿ ರವರು ಹೊರಡಿಸಿರುವ ಸಾರ್ವಜನಿಕ ಪತ್ರಿಕಾ ಪ್ರಕಟಣೆಯನ್ನು ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಒದಿದರು, ಮತ್ತು ಕಲ್ಯಾಣ ಕಾರ್ಯಕ್ರಮದಡಿ ಪಾಲಿಕೆಯ ವ್ಯಾಪ್ತಿಯಲ್ಲಿ ಸ್ವಂತ ನಿವೇಶನ ಹೊಂದಿರುವವರಿಗೆ ಮನೆ ನಿರ್ಮಾಣ ಮಾಡಿಕೊಳ್ಳಲು ರೂ.5.00ಲಕ್ಷಗಳ ಸಹಾಯಧನ. ನೀಡಲಾಗುತ್ತಿದ್ದು, ದಿನಾಂಕ: 20-08-2022 ರಿಂದ ದಿನಾಂಕ:19-09-2022 ರವರೆಗೆ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಎಂಬುದಾಗಿ ಸಭೆಯಲ್ಲಿ ಹಾಜರಾಗಿರುವ ಎಲ್ಲಾ ಸಾರ್ವಜನಿಕರಿಗೆ ಆನ್‌ಲೈನ್‌ಲ್ಲಿ ಅರ್ಜಿಗಳನ್ನು ಸಲ್ಲಿಸುವಂತೆ ತಿಳಿಸಲಾಯಿತು. | | |
| 02 | ಪುರಸಭೆಯಲ್ಲಿ ಚಾಲ್ತಿಯಲ್ಲಿದ್ದ ಬೋರ್‌ವೆಲ್‌ಗಳಿಗೆ ಸಂಬಂದಿಸಿದಂತೆ ನೀರಿನ ಬಿಲ್ಲುಗಳನ್ನು ಪಾವತಿಸುವಂತೆ ಹಾಗೂ ಪುರಸಬೆ ನಂತರ ನಗರ ಸಬೆ ನಂತರ 2007 ರಲ್ಲಿ ಬಿ.ಬಿ.ಎಂ.ಪಿ ಆಗಿರುತ್ತದೆ. ಸುಮಾರು 15 ವರ್ಷಗಳ ನಂತರ ಪುರಸಭೆಯಲ್ಲಿ ಭಾಕಿ ಇರುವಂತಹ ನೀರಿನ ಬಿಲ್ಲುಗಳನ್ನು ಕಛೇರಿಗಳಿಗೆ ನೀಡುತ್ತಿರುವುದು ಕಂಡು ಬಂದಿರುತ್ತದೆ. ಇದರ ಬಗ್ಗೆ ಸೂಕ್ತ ವಿವರಣೆ ನೀಡುವಂತೆ ಅ.ಬ.ಶಿವಕುಮಾರ್ ರವರು ಸಭೆಯಲ್ಲಿ ಅಕ್ಷೇಪಣೆ ವ್ಯಕ್ತಪಡಿಸಿದರು. | ಇದಕ್ಕೆ ಸಂಬಂದಿಸಿದಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರಾದ ವಿನಯ್ ಕುಮಾರ್ ರವರಿಗೆ ಸ್ಥಳ ಪರಿಶೀಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ವಿನಯ ಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |

| | | | |
|---|---|---|---|
| 03 | ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಸರಿಯಾದ ರೀತಿಯಲ್ಲಿ ಕೆಲಸ ನಿರ್ವಹಿಸುತ್ತಿಲ್ಲವೆಂದು ಸಭೆಯಲ್ಲಿ ಸಾರ್ವಜನಿಕರು ದೂರನ್ನು ಸಲ್ಲಿಸಿದರು. | ಇದಕ್ಕೆ ಸಂಬಂದಿಸಿದಂತೆ ಸಭೆಯಲ್ಲಿ ಹಾಜರಿದ್ದ ಮಾರ್ಷಲ್ ಸೂಪರ್‌ವೈಸರ್ ಮಾತನಾಡಿ ಇನ್ನು ಮುಂದೆ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕೆಲಸ ನಿರ್ವಹಿಸುತ್ತೆನೆಂದು ನೋಡೆಲ್ ಅಧಿಕಾರಿಗಳಿಗೆ ವರದಿ ಒಪ್ಪಿಸಿದರು. | ಮಾರ್ಷಲ್ |
| 04 | ಯಲಹಂಕ ಕಂದಾಯ ಇಲಾಖೆಗೆ ಸಂಬಂದಿಸಿದಂತೆ ಹಳೆ ಖಾತೆಗಳು ನೊಂದಾವಣೆ ಮಾಡುತ್ತಿಲ್ಲ ವೆಂದು ಸಿ.ಎಂ.ಸಿ ಖಾತೆಗಳಿಗೆ ಖಾತಾ ಪ್ರಮಾಣ ಪತ್ರ ನೀಡುತ್ತಿಲ್ಲವೆಂದು ಈ ಹಿಂದಿನ ಸಭೆಯಲ್ಲಿ ಅಕ್ಷೇಪಣೆ ಸಲ್ಲಿಸಿದ್ದು, ಇದರ ಬಗ್ಗೆ ದಿನಾಂಕ:20-08-2022 ರಂದು ನಡೆದ ಸಭೆಯಲ್ಲಿ ಮತ್ತೊಮ್ಮೆ ಚರ್ಚಿಸಲಾಯಿತು. | ಇದಕ್ಕೆ ಸಂಬಂದಿಸಿದಂತೆ ಸಹಾಯಕ ಕಂಧಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗರವರು ಮಾತನಾಡಿ ಸಭೆಯಲ್ಲಿ ಸಲ್ಲಿಸಿರುವ ಅಕ್ಷೇಪಣೆಗಳಿಗೆ ಸಮಂಜಸವಾದ ವಿವರಣೆ ನೀಡಿದರು. | ಸಹಾಯಕ ಕಂಧಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ |
| 05 | ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಆರ್.ಆರ್.ಗೋಲ್ಡ್ ಪ್ಯಾಲೆಸ್ ಮುಂಬಾಗ ಮತ್ತು ಪೊಸ್ಟ್ ಆಪೀಸ್ ಮುಂಭಾಗ ಬಿ.ಎಂ.ಟಿ.ಸಿ ಬಸ್‌ಗಳು ಸುಮಾರು ಅರ್ದ ಗಂಟೆಗಳ ಕಾಲ ನಿಲ್ಲಿಸುತ್ತಿರುವುದರಿಂದ ಸಾರ್ವಜನಿಕರ ಒಡಾಟಕ್ಕೆ ಮತ್ತು ವಾಹನ ಸಂಚಾರಕ್ಕೆ ತುಂಬಾ ತೊಂದರೆ ಉಂಟಾಗುತ್ತಿರುವ ಬಗ್ಗೆ ಈ ಹಿಂದೆ ಹಲವಾರು ಭಾರಿ ದೂರುಗಳನ್ನು ಸಲ್ಲಿಸಿದ್ದರೂ ಸಹ ಕ್ರಮ ಕೈಗೊಂಡಿರುವುದಿಲ್ಲ ಮತ್ತು ಬಿ.ಎಂ.ಟಿ.ಸಿ ಅಧಿಕಾರಿಗಳು ಸಭೆಗೆ ಹಾಜರಾಗಿರುವುದಿಲ್ಲ ವೆಂದು ಸಲ್ಲಿಸಿದ್ದ ದೂರಿನ ಬಗ್ಗೆ ಮತ್ತೊಮ್ಮೆ ಶ್ರೀ. ಶಿವಕುಮಾರ್ ರವರು ಸಭೆಯಲ್ಲಿ ಪ್ರಸ್ತಾಪಿಸಿದರು. | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಮುಂದಿನ ಸಭೆಗೆ ಹಾಜರಾಗುವಂತೆ ಬಿ.ಎಂ.ಟಿ.ಸಿ ಅಧಿಕಾರಿಗಳಿಗೆ ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು. | ಬಿ.ಎಂ.ಟಿ.ಸಿ ಡಿಪೋ ಮ್ಯಾನೇಜರ್ |

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ.ಕೆ.ಬಿ.ದೇವರಾಜಯ್ಯ
ಸಹಾಯಕ ಅಭಿಯಂತರರು

ಶ್ರೀ.ರಾಮಸಂಜೀವಯ್ಯ
ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ-01

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.

4. ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ಯಲಹಂಕ ವಿಭಾಗ/ವಿದ್ಯುತ್/ರಸ್ತೆ ಮತ್ತು ಮೂಲಭೂತ ಸೌಕಾರ್ಯ/ಯೋಜನೆ/ಕೆರೆಗಳು/ ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ/ ವಿದ್ಯುತ್/ ಬೇಸ್ಕಾಂ/ ಬಿಡಬ್ಲ್ಯೂ.ಎಸ್.ಎಸ್.ಬಿ/ಬೊರೆವೆಲ್ ಡಿವಿಷನ್/ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ/ಜಾಹಿರಾತು ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
7. ಆರಕ್ಷಕ ನೀರಿಕ್ಷಕರು ಯಲಹಂಕ ಪೊಲೀಸ್ ಠಾಣೆ ಸಂಚಾರಿ/ ಕಾನೂನು ಸುವ್ಯವಸ್ಥೆ/ ಯಲಹಂಕ ಬೆಂಗಳೂರು ರವರ ಸೂಕ್ತ ಕ್ರಮಕ್ಕಾಗಿ.
8. ಜಾನುವಾರಿ ಅಧಿಕಾರಿಗಳು ಪಶುಪಾಲನೆ ವಿಭಾಗ ಯಲಹಂಕ ವಲಯ ರವರ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕರು ತೋಟಗಾರಿಕೆ ಇಲಾಖೆ ಬಿ.ಬಿ.ಎಂ.ಪಿ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
10. ಡಿಪೋ ಮ್ಯಾನೇಜರ್ ಡಿಪೊ –13 ಪುಟ್ಟೇನಹಳ್ಳಿ ಡಿಪೋ ಯಲಹಂಕ ಬೆಂಗಳೂರು ಸೂಕ್ತ ಕ್ರಮಕ್ಕಾಗಿ.
11. ಕಛೇರಿ ಕಡತಕ್ಕೆ.